**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ ಟಿ ರವಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ವಿಷಯ:**

ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಪ್ರಕಟವಾಗಿರುವ **"ಅತಿಥಿ ಉಪನ್ಯಾಸಕರಿಗೆ ಶಾಕ್"** ಎಂಬ ಶಿರೋನಾಮೆಯಡಿ ಯುಜಿಸಿ ನಿಯಮಾವಳಿ ನೆಪದಲ್ಲಿ 6,665 ಜನರಿಗೆ ಅರ್ಧಚಂದ್ರ ಎಂದು ಪ್ರಕಟವಾಗಿರುವ ವರದಿಯ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ.

ರಾಜ್ಯದ ಪದವಿ ಕಾಲೇಜುಗಳಿಗೆ ಕಳೆದ ತಿಂಗಳು ಕೌನ್ಸಿಲಿಂಗ್ ಮೂಲಕ ಆಯ್ಕೆಯಾದ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಆರಂಭವಾಗಿದ್ದು, ಇದರಿಂದಾಗಿ ಯುಜಿಸಿ ಅರ್ಹತೆ ಇಲ್ಲದ 6,665 ಅತಿಥಿ ಉಪನ್ಯಾಸಕರು ಉದ್ಯೋಗ ಕಳೆದುಕೊಂಡಿದ್ದಾರೆ. ಮಾನವೀಯತೆ ಹಾಗೂ ಹಿರಿತನದ ಆಧಾರದ ಮೇಲೆ ಸೇವಾ ಭದ್ರತೆ ಒದಗಿಸುವಂತೆ ಒತ್ತಾಯಿಸಿ ಯುಜಿಸಿ ಅರ್ಹತೆ ವಂಚಿತ ಉಪನ್ಯಾಸಕರು ಪ್ರತಿಭಟನೆಯ ಹಾದಿ ಹಿಡಿದಿದ್ದಾರೆ. ಈ ಮಧ್ಯೆ ಕಾಲೇಜು ಶಿಕ್ಷಣ ಇಲಾಖೆ ಡಿಸೆಂಬರ್ 8 ರಂದು ಏಕಾಏಕಿ ರಾಜ್ಯದ ಎಲ್ಲ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿದ್ದ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸಿದೆ. ಅಲ್ಲದೇ ಡಿಸೆಂಬರ್ 8 ರಿಂದ 10ರ ಒಳಗಾಗಿ ನವೆಂಬರ್‌ನಲ್ಲಿ ಕೌನ್ಸೆಲಿಂಗ್ ಮೂಲಕ ಆಯ್ಕೆಯಾದವರನ್ನು ಸೇವೆಗೆ ಸೇರಿಕೊಳ್ಳಲು ಅವಕಾಶ ನೀಡಿದೆ.

ರಾಜ್ಯದ ಕೆಲ ವಿವಿಗಳ ವ್ಯಾಪ್ತಿಯಲ್ಲಿ ಡಿಸೆಂಬರ್ 17 ಮತ್ತು ಇನ್ನೂ ಕೆಲವು ಕಡೆ ಡಿಸೆಂಬರ್ 21 ರವರೆಗೆ ಅತಿಥಿ ಉಪನ್ಯಾಸಕರ ಸೇವಾವಧಿ ಇತ್ತು. ದಿಢೀರನೇ ಎಲ್ಲ ಅತಿಥಿ ಉಪನ್ಯಾಸಕರನ್ನು ಬಿಡುಗಡೆ ಮಾಡಿ, ಕೌನ್ಸೆಲಿಂಗ್ ಮೂಲಕ ಆಯ್ಕೆಯಾದವರನ್ನು ಭರ್ತಿ ಮಾಡಿಕೊಳ್ಳಲು ಆರಂಭವಿಸಿರುವುದು, ಯುಜಿಸಿ ಅರ್ಹತೆ ಇಲ್ಲದ ಅತಿಥಿ ಉಪನ್ಯಾಸಕರಿಗೆ ಆಘಾತ ತಂದಿದೆ. ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ, ವೇತನ ಹೆಚ್ಚಳ ಮಾಡಬೇಕು ಎಂಬುದು ಹಲವು ವರ್ಷಗಳ ಬೇಡಿಕೆಯಾಗಿದೆ. ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ನೀಡುವುದಾಗಿ ತಮ್ಮ ಪ್ರಣಾಳಿಕೆಯಲ್ಲಿ ಭರವಸೆ ನೀಡಿ, ಈಗ ಕೊಟ್ಟಿದ್ದ ಭರವಸೆ ಈಡೇರಿಸುವ ಬದಲು ಅವರನ್ನು ಸೇವೆಯಿಂದ ಬಿಡುಗಡೆ ಮಾಡಿ ಅತಿಥಿ ಉಪನ್ಯಾಸಕರಿಗೆ ಸರ್ಕಾರ ಅನ್ಯಾಯ ಮಾಡಿದೆ.

ಹೊಸದಾಗಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡುವಾಗ ಯುಜಿಸಿ ನಿಯಮಾವಳಿಗಳನ್ನು ಪರಿಗಣಿಸಲಿ, ಆದರೆ ದಶಕಗಳಿಂದ ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರಿಗೆ ಯುಜಿಸಿ ನಿಯಮಾವಳಿ ಅನ್ವಯಿಸುವುದು ಸರಿಯಾದ ಕ್ರಮವಲ್ಲ. ಸರ್ಕಾರ ತಕ್ಷಣ ಅತಿಥಿ ಉಪನ್ಯಾಸಕರ ಬಿಡುಗಡೆ ಆದೇಶ ರದ್ದುಪಡಿಸಿ, ಅವರಿಗೆ ಸೇವಾ ಭದ್ರತೆ ನೀಡಬೇಕೆಂದು ಸರ್ಕಾರವನ್ನು ಆಗ್ರಹಿಸುತ್ತೇನೆ.

**ಉತ್ತರ:**

ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು 24.01.2022ರಲ್ಲಿ ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಕಲಾ/ವಾಣಿಜ್ಯ ವಿಷಯಗಳಿಗೆ ಗರಿಷ್ಠ 8 ಗಂಟೆ ಹಾಗೂ ವಿಜ್ಞಾನ ವಿಷಯಗಳು/ಪ್ರಾಯೋಗಿಕ ತರಗತಿಗಳಿಗೆ ಗರಿಷ್ಠ10 ಗಂಟೆಗಳ ಬದಲಾಗಿ, ಕಲಾ/ವಾಣಿಜ್ಯ ವಿಷಯಗಳಿಗೆ ಗರಿಷ್ಠ 15 ಗಂಟೆ ಹಾಗೂ ವಿಜ್ಞಾನ ವಿಷಯಗಳು/ಪ್ರಾಯೋಗಿಕ ತರಗತಿಗಳಿಗೆ ಗರಿಷ್ಠ 19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಹೆಚ್ಚಿಸಲಾಗಿದೆ. ಸದರಿ ಆದೇಶದಲ್ಲಿ "ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 3 ವರ್ಷಗಳ ಕಾಲಾವಧಿ ನೀಡುವುದು, 3 ವರ್ಷಗಳ ನಂತರ ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು" ಎಂಬುದಾಗಿ ಆದೇಶಿಸಲಾಗಿರುತ್ತದೆ. ಅದರನ್ವಯ ಯು.ಜಿ.ಸಿ. ಅರ್ಹತೆ ಪಡೆಯದ ಅತಿಥಿ ಉಪನ್ಯಾಸಕರಿಗೆ ಯು.ಜಿ.ಸಿ. ವಿದ್ಯಾರ್ಹತೆಯನ್ನು ಪಡೆಯಲು ದಿನಾಂಕ:14.01.2022 ರಿಂದ ದಿನಾಂಕ:13.01.2025ರವರೆಗೆ 03 ವರ್ಷಗಳ ಕಾಲಾವಕಾಶವನ್ನು ನೀಡಲಾಗಿತ್ತು.

ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ, ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ಸಲ್ಲಿಕೆಯಾಗಿದ್ದ ರಿಟ್ ಅರ್ಜಿ ಸಂಖ್ಯೆ:23600/2023ಕ್ಕೆ ಮಾನ್ಯ ನ್ಯಾಯಾಲಯವು ದಿನಾಂಕ:05.09.2024ರಂದು ತೀರ್ಪು ನೀಡಿ, ಅತಿಥಿ ಉಪನ್ಯಾಸಕರ ಆಯ್ಕೆಗೆ ಯು.ಜಿ.ಸಿ. ವಿದ್ಯಾರ್ಹತೆ

(ಎನ್‌ಇಟಿ/ಎಸ್‌ಎಲ್‌ಇಟಿ/ ಪಿಹೆಚ್.ಡಿ) ಮಾನದಂಡವನ್ನು ಅನುಸರಿಸುವಂತೆ ಆದೇಶಿಸಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ:05.09.2024ರ ತೀರ್ಪಿನ ಸಂಬಂಧ ಇಲಾಖಾ ವತಿಯಿಂದ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ:1578/2024ನ್ನು ದಾಖಲಿಸಲಾಗಿತ್ತು. ಸದರಿ ರಿಟ್ ಅಪೀಲು ಸಂಖ್ಯೆ:1578/2024ನ್ನು ಮಾನ್ಯ ವಿಭಾಗೀಯ ಪೀಠವು (Chief Justice Bench) ದಿನಾಂಕ:08.10.2025ರಂದು ವಿಚಾರಣೆಗೆ ತೆಗೆದುಕೊಂಡಿದ್ದು, ಸದರಿ ದಿನಾಂಕದಂದು ರಾಜ್ಯದ ರಿಟ್ ಅಪೀಲನ್ನು ವಜಾಗೊಳಿಸಿ, ನೀಡಿರುವ ಅಂತಿಮ ತೀರ್ಪಿನಲ್ಲಿ ರಿಟ್ ಅರ್ಜಿ ಸಂಖ್ಯೆ:23600/2023ರಲ್ಲಿ ದಿನಾಂಕ:05.09.2024ರಂದು ನೀಡಿರುವ ತೀರ್ಪನ್ನು ಎತ್ತಿ ಹಿಡಿದು, 2025-26ನೇ ಸಾಲಿನಿಂದ ಯು.ಜಿ.ಸಿ. ನಿಯಮಗಳನ್ವಯ ನೇಮಕ ಮಾಡಿಕೊಳ್ಳುವಂತೆ ನಿರ್ದೇಶನ ನೀಡಿರುತ್ತದೆ.

ಈ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಹಾಗೂ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:23600/2023 ಕ್ಕೆ ದಿನಾಂಕ:05.09.2024 ರಂದು ಮತ್ತು ರಿಟ್ ಅಪೀಲು ಸಂಖ್ಯೆ:1578/2024 ಕ್ಕೆ ದಿನಾಂಕ:08.10.2025 ರಂದು ನೀಡಿರುವ ಅಂತಿಮ ತೀರ್ಪಿನನ್ವಯ ಸೇವಾ ಅನುಭವದೊಂದಿಗೆ ಯುಜಿಸಿ ವಿದ್ಯಾರ್ಹತೆ (ಎನ್‌ಇಟಿ/ ಎಸ್‌ಎಲ್‌ಇಟಿ/ಪಿಹೆಚ್.ಡಿ) ಆಧಾರದ ಮೇಲೆ ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ 2025-26ನೇ ಸಾಲಿಗೆ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳುವ ಸಂಬಂದ ಈ ಕಛೇರಿಯ ದಿನಾಂಕ:31.10.2025 ರ ಪ್ರಕಟಣೆಯಲ್ಲಿ ಆಯ್ಕೆ ಪ್ರಕ್ರಿಯೆಯ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸದರಿ ವೇಳಾಪಟ್ಟಿಯನ್ವಯ ದಿನಾಂಕ:24.11.2025 ರಿಂದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಲಾಗಿದ್ದು, ಸದರಿ ಆನ್‌ಲೈನ್ ಕೌನ್ಸಿಲಿಂಗ್ ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳಿಗೆ ಸಂಬಂದಪಟ್ಟ ಕಾಲೇಜುಗಳಲ್ಲಿ 03 ದಿನಗಳ ಒಳಗಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಈ ಕಛೇರಿಯ ದಿನಾಂಕ:08.12.2025 ರ ಸುತ್ತೋಲೆಯಲ್ಲಿ ಅವಕಾಶ ನೀಡಲಾಗಿದೆ. ಅದರನ್ವಯ ಅತಿಥಿ ಉಪನ್ಯಾಸಕ ಅಭ್ಯರ್ಥಿಗಳು ಕೌನ್ಸಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುತ್ತಿದ್ದಾರೆ.

ಅಲ್ಲದೆ, ರಿಟ್ ಅಪೀಲು ಸಂಖ್ಯೆ:1578/2024ಕ್ಕೆ ದಿನಾಂಕ:08.10.2025ರ ತೀರ್ಪಿನಲ್ಲಿ ನೀಡಿರುವ ನಿರ್ದೇಶನದಂತೆ ಕೆಲವು ವಿಷಯಗಳಲ್ಲಿ (ಉದಾ: ಗಣಕ ವಿಜ್ಞಾನ, ನಿರ್ವಹಣಾಶಾಸ್ತ್ರ, ಇತ್ಯಾದಿ) ಯು.ಜಿ.ಸಿ. ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಾಗಿಲ್ಲದಿರುವುದರಿಂದ ಈ ಮಾಹಿತಿಯನ್ನು ಮಾನ್ಯ ನ್ಯಾಯಾಲಯದ ಗಮನಕ್ಕೆ ತಂದು ಅಂತಹ ವಿಷಯಗಳಿಗೆ ಮಾತ್ರ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿಲ್ಲದಿರುವ ಅಭ್ಯರ್ಥಿಗಳನ್ನು ಅವರ ಸೇವಾ ಅನುಭವವನ್ನು ಪರಿಗಣಿಸಿ ಮೆರಿಟ್ ಆಧಾರದ ಮೇಲೆ ಆಯ್ಕೆಗೆ ಪರಿಗಣಿಸಲಾಗುತ್ತದೆ.

ರಿಟ್ ಅಪೀಲು ಸಂಖ್ಯೆ:1578/2024ರಲ್ಲಿ ದಿನಾಂಕ:08.10.2025ರಂದು ನೀಡಿರುವ ತೀರ್ಪಿನ ಕುರಿತು ಕಾನೂನು ಅಭಿಪ್ರಾಯ ಪಡೆಯಲಾಗಿದ್ದು, ನೀಡಿರುವ ಅಭಿಪ್ರಾಯದನ್ವಯ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ.ಯನ್ನು ದಾಖಲಿಸಲು ಸರ್ಕಾರವು ಆದೇಶ ಸಂಖ್ಯೆ:ಇಡಿ 425 ಡಿಸಿಇ 2025, ದಿನಾಂಕ:29.11.2025ರಲ್ಲಿ ಕಾರ್ಯಕಾರಿ ಆದೇಶವನ್ನು ಹೊರಡಿಸಿದೆ.

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ **ಅತಿಥಿ ಉಪನ್ಯಾಸಕರುಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನು** ನೀಡಲಾಗಿದೆ.

**ಗೌರವಧನ ಪರಿಷ್ಕರಣೆ:**

ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು 24.01.2022ರನ್ವಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ ಕಾರ್ಯಭಾರದ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಅವರ ಸೇವಾ ಅವಧಿಯೊಂದಿಗೆ ಯು.ಜಿ.ಸಿ. ವಿದ್ಯಾರ್ಹತೆ ಆಧರಿಸಿ ಗೌರವಧನವನ್ನು ಈ ಹಿಂದೆ ನಿಗಧಿಪಡಿಸಿದ್ದ ರೂ.11,000/- ಮತ್ತು ರೂ.13,000/- ಗಳನ್ನು ಪರಿಷ್ಕರಿಸಿ, ಸರ್ಕಾರದ ಆದೇಶ ಸಂಖ್ಯೆ ಇಡಿ 36 ಡಿಸಿಇ 2024 (ಇ), ದಿನಾಂಕ:04-03-2024 ರನ್ವಯ ಗೌರವಧನವನ್ನು ಕನಿಷ್ಠ ರೂ.35,000/- ರಿಂದ ಗರಿಷ್ಠ ರೂ.40,000/- ರವರೆಗೆ ಹೆಚ್ಚಿಸಿ, ಆದೇಶಿಸಲಾಗಿದೆ.

ಮುಂದುವರೆದು, ಅತಿಥಿ ಉಪನ್ಯಾಸಕರಿಗೆ ಪ್ರತಿ ತಿಂಗಳು ಗೌರವಧನ ಪಾವತಿಗೆ ಅನುಕೂಲವಾಗುವಂತೆ ಅಗತ್ಯವಿರುವ ಅನುದಾನವನ್ನು ಕಾಲೇಜುಗಳಿಗೆ ಬಿಡುಗಡೆ ಮಾಡಲಾಗುತ್ತಿದೆ.

**ಇಡಿಗಂಟು:**

ಸರ್ಕಾರದ ಆದೇಶ ಸಂಖ್ಯೆ ಇಡಿ 36 ಡಿಸಿಇ 2024 (ಇ), ದಿನಾಂಕ:04-03-2024 ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿದ 60 ವರ್ಷ ಮೀರಿದ ಅತಿಥಿ ಉಪನ್ಯಾಸಕರುಗಳಿಗೆ ಭದ್ರತಾ ರೂಪದಲ್ಲಿ ವಾರ್ಷಿಕ ರೂ.50,000/- ದಂತೆ ಗರಿಷ್ಠ 5.00 ಲಕ್ಷಗಳ ಮೊತ್ತದ ಇಡಿಗಂಟಿನ ಸೌಲಭ್ಯವನ್ನು ನೀಡಲು ಮಂಜೂರಾತಿ ನೀಡಿದೆ.

**ವಿಮಾ ಸೌಲಭ್ಯ:**

ಅತಿಥಿ ಉಪನ್ಯಾಸಕರ ಆರೋಗ್ಯ ದೃಷ್ಟಿಯಿಂದ ವಾರ್ಷಿಕ ರೂ.5.00 ಲಕ್ಷಗಳ ಆರೋಗ್ಯ ವಿಮಾ ಸೌಲಭ್ಯವನ್ನು ನೀಡುವ ನಿಟ್ಟಿನಲ್ಲಿ (ಅತಿಥಿ ಉಪನ್ಯಾಸಕರಿಂದ ವಂತಿಗೆ ರೂಪದಲ್ಲಿ ಮಾಸಿಕ ರೂ.400 + ಸರ್ಕಾರದಿಂದ ರೂ.400 ಒಟ್ಟು ರೂ.800/-) ಆರೋಗ್ಯ ವಿಮಾ ಸೌಲಭ್ಯವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ. ಆದರೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ: ಆಕುಕ 324 ಸಿಜಿಇ 2025, ದಿನಾಂಕ:24.06.2025 ರಲ್ಲಿ "ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ, ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ 03 ಲಕ್ಷಕ್ಕೂ ಅಧಿಕ ಸಿಬ್ಬಂದಿ ವರ್ಗ ಹಾಗೂ ಅವಲಂಬಿತರಿಗೆ 5 ಲಕ್ಷ ರೂ. ವರೆಗೆ ನಗದು ರಹಿತ ಚಿಕಿತ್ಸೆ ನೀಡಲು ಯೋಜನೆ ರೂಪಿಸಲಾಗಿದ್ದು, ಸಿಬ್ಬಂದಿಯ ವೈಯಕ್ತಿಕ ಮಾಸಿಕ ವಂತಿಕೆ 100 ರೂ. ಮತ್ತು ಸರ್ಕಾರದ ಮಾಸಿಕ ವಂತಿಕೆ 200 ರೂ. ಗಳೊಂದಿಗೆ ಸುವರ್ಣ ಆರೋಗ್ಯ ಟ್ರಸ್ಟ್ ಮೂಲಕ ಅನುಷ್ಠಾನಗೊಳಿಸುವ ಸಂಬಂಧ ನೌಕರರಿಂದ ಮಾಸಿಕ ಕೊಡುಗೆ ಮತ್ತು ಬಾಕಿ ಉಳಿದ ಹಣವನ್ನು ರಾಜ್ಯ ಇಲಾಖೆಯಿಂದ ಪಾವತಿಸಲು ಅನುಮೋದನೆ ನೀಡಿ ಆದೇಶಿಸಲಾಗಿದೆ." ಸದರಿ ಯೋಜನೆಯ ವ್ಯಾಪ್ತಿಗೆ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಗೌರವಧನದ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಸಕರಿಗೂ ಒಳಪಡಲಿದ್ದು, ಈ ಯೋಜನೆಯ ಸಾಧಕ-ಬಾಧಕಗಳ ಬಗ್ಗೆ ಪರಿಶೀಲಿಸಿ, ಸದರಿ ಯೋಜನೆಯನ್ನು ಅತಿಥಿ ಉಪನ್ಯಾಸಕರಿಗೆ ಅನುಷ್ಠಾನಗೊಳಿಸುವ ಬಗ್ಗೆ ಕ್ರಮವಹಿಸಲಾಗುತ್ತಿದೆ.

**ರಜಾ ಸೌಲಭ್ಯ:**

ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಡಿಸಿಇ 2024(ಇ), ದಿನಾಂಕ:14-03-2024ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 15/19 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ 01 ದಿನ ಸಾಂದರ್ಭಿಕ ರಜೆಯನ್ನು, ಸದರಿ 01 ದಿನದ ಕಾರ್ಯಭಾರವನ್ನು ಇತರೆ ದಿನಗಳಲ್ಲಿ ಸರಿದೂಗಿಸಿಕೊಳ್ಳುವ ಷರತ್ತಿಗೆ ಒಳಪಟ್ಟು ಮಂಜೂರು ಮಾಡಿ ಆದೇಶಿಸಿದೆ.

**ಸಂಖ್ಯೆ: ಇಡಿ 458 ಡಿಸಿಇ 2025(ಇ)**

(ಡಾ. ಎಂ.ಸಿ ಸುಧಾಕರ್)
ಉನ್ನತ ಶಿಕ್ಷಣ ಸಚಿವರು